# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಮಂಡ್ಯ ಜಿಲ್ಲಾ ಸರ್ಕಾರಿ ನೌಕರರ ಸಮುದಾಯ ಭವನ ನಿರ್ಮಾಣಕ್ಕೆ ಜಿಲ್ಲೆಯ ಸರ್ಕಾರಿ ಅಧಿಕಾರಿಗಳು ಹಾಗೂ ನೌಕರರ ಒಂದು ದಿನದ ವೇತನವನ್ನು ಕಟಾಯಿಸಿ ವಂತಿಗೆಯಾಗಿ ನೀಡುವ ಬಗ್ಗೆ.

***

ಓದಲಾಗಿದೆ:

1. ಜಿಲ್ಲಾಧಿಕಾರಿ, ಮಂಡ್ಯ ಜಿಲ್ಲೆ, ಇವರ ಪತ್ರ ಸಂಖ್ಯೆ: ಇಎಸ್‌ಟಿ(5)21/2019-20, ದಿನಾಂಕ 22.08.2019
2. ಮಹಾಲೇಖಪಾಲಕರ ಕಛೇರಿಯ ದಿನಾಂಕ: 24-10-2019ರ ಪತ್ರ.

ಪ್ರಸ್ತಾವನೆ:

ಮೇಲೆ ಓದಲಾದ ದಿನಾಂಕ 22.08.2019 ರ ಪತ್ರದಲ್ಲಿ ಮಂಡ್ಯ ಜಿಲ್ಲೆಯ ಜಿಲ್ಲಾಧಿಕಾರಿಗಳು, ದಿನಾಂಕ 30-11-2017 ರಂದು ನಡೆದ ಜಿಲ್ಲಾ ಸರ್ಕಾರಿ ನೌಕರರ ಸಂಘದ ಕಾರ್ಯಕಾರಿ ಸಮಿತಿಯ ಸಭೆಯಲ್ಲಿ ಮಂಡ್ಯ ನಗರದಲ್ಲಿ ಸರ್ಕಾರಿ ನೌಕರರ ಭವನವನ್ನು ನಿರ್ಮಿಸಲು ಹಾಗೂ ಇದರ ನಿರ್ಮಾಣಕ್ಕಾಗಿ ಮಂಡ್ಯ ಜಿಲ್ಲೆಯ ಸಮಸ್ತ ಸರ್ಕಾರಿ ಅಧಿಕಾರಿಗಳು ಮತ್ತು ನೌಕರರ ಒಂದು ದಿನದ ಸಂಬಳವನ್ನು ದೇಣಿಗೆಯಾಗಿ ನೀಡುವ ಬಗ್ಗೆ ನಿರ್ಣಯವನ್ನು ಅಂಗೀಕರಿಸಿದ್ದು, ಮಂಡ್ಯ ಜಿಲ್ಲೆಯ ರಾಜ್ಯ ಸರ್ಕಾರಿ ಅಧಿಕಾರಿಗಳು ಮತ್ತು ನೌಕರರ ವೇತನದಿಂದ ಒಂದು ದಿನದ ವೇತನವನ್ನು ಕಟಾಯಿಸಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಮಂಡ್ಯ ಇವರು ಕೋರಿದ್ದಾರೆಂದೂ, ಅದರಂತೆ ಸೂಕ್ತ ಆದೇಶ ಹೊರಡಿಸಬೇಕೆಂದು ಕೋರಿರುತ್ತಾರೆ.

ಜಿಲ್ಲಾಧಿಕಾರಿ, ಮಂಡ್ಯ ಜಿಲ್ಲೆ ಇವರ ಕೋರಿಕೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 07 ಎಸ್‌ಆರ್‌ಪಿ 2019,**
**ಬೆಂಗಳೂರು, ದಿನಾಂಕ: 7ನೇ ನವೆಂಬರ್ 2019**

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ, ಮಂಡ್ಯ ನಗರದಲ್ಲಿ ಸರ್ಕಾರಿ ನೌಕರರ ಸಮುದಾಯ ಭವನವನ್ನು ನಿರ್ಮಿಸಲು ಮಂಡ್ಯ ಜಿಲ್ಲಾ ಸರ್ಕಾರಿ ನೌಕರರ ಸಂಘದ ಕಾರ್ಯಕಾರಿ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಮಂಡ್ಯ ಜಿಲ್ಲೆಯ ರಾಜ್ಯ ಸರ್ಕಾರಿ ನೌಕರರ ಒಂದು ದಿನದ ವೇತನವನ್ನು 2019ರ ನವೆಂಬರ್ ತಿಂಗಳ ವೇತನದಲ್ಲಿ ಕಟಾಯಿಸಲು ಮಂಜೂರಾತಿ ನೀಡಿದೆ.

2. ವೇತನ ಬಿಲ್ಲಿನಲ್ಲಿ ಕಟಾಯಿಸಿದ ಮೊತ್ತವನ್ನು ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ ಇವರಿಗೆ ಚೆಕ್ ಮೂಲಕ ಖಜಾನೆ ಅಧಿಕಾರಿಗಳು ಸಂದಾಯ ಮಾಡುವುದು ಹಾಗೂ ಈ ಕುರಿತು ಈ ಕೆಳಗೆ ಸೂಚಿಸಿರುವ ವಿಧಿ ವಿಧಾನಗಳಂತೆ ಕ್ರಮ ತೆಗೆದುಕೊಳ್ಳುವುದು:-

ಅ) ನೌಕರರ ಒಂದು ದಿನದ ವೇತನ ವಂತಿಗೆಯನ್ನು 2019ರ ನವೆಂಬರ್ ತಿಂಗಳ ವೇತನದ ಬಿಲ್ಲಿನಿಂದ ಕಟಾವುಗೊಳಿಸುವ ಮೂಲಕ ವಸೂಲು ಮಾಡಲು ಆಯಾ ಕಛೇರಿ ಮುಖ್ಯಾಧಿಕಾರಿಗಳು ಮತ್ತು ಖಜಾನಾಧಿಕಾರಿಗಳು ಅಧಿಕಾರ ಪಡೆದಿರುತ್ತಾರೆ.

ಆ) ಒಂದು ದಿನದ ವೇತನವನ್ನು ವಂತಿಗೆಯಾಗಿ ಕೊಡಲಿಚ್ಛಿಸದ ನೌಕರರು ತಮ್ಮ ಅಸಮ್ಮತಿಯನ್ನು ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳಿಗೆ ಲಿಖಿತ ಮೂಲಕ ಸಲ್ಲಿಸತಕ್ಕದ್ದು ಮತ್ತು ಅಂತಹ ಲಿಖಿತ ಪತ್ರ ನೌಕರರಿಂದ ನವೆಂಬರ್ ತಿಂಗಳಿನ ಸಂಬಳದ ಬಿಲ್ಲನ್ನು ಖಜಾನೆಗೆ ಸಲ್ಲಿಸುವ ದಿನಾಂಕದ ಒಳಗಾಗಿ ಬಂದಿದ್ದಲ್ಲಿ ಮಾತ್ರ ಅಂತಹ ನೌಕರನ/ಳ ಒಂದು ದಿನದ ವೇತನವನ್ನು 2019ರ ನವೆಂಬರ್ ತಿಂಗಳಿನ ವೇತನ ಬಿಲ್ಲಿನಲ್ಲಿ ಕಟಾವು ಮಾಡತಕ್ಕದ್ದಲ್ಲ.

ಇ) ಪ್ರತಿಯೊಬ್ಬ ನೌಕರನ/ಳ ಕಟಾಯಿಸಿದ ಒಂದು ದಿನದ ವೇತನದ ಮೊತ್ತವನ್ನು ಬಿಲ್ಲಿನಲ್ಲಿ ಅವರ ಹೆಸರಿನ ಎದುರಿನಲ್ಲಿ **"ಮಂಡ್ಯ ಸರ್ಕಾರಿ ನೌಕರರ ಸಮುದಾಯ ಭವನದ ನಿರ್ಮಾಣಕ್ಕಾಗಿ ವಂತಿಕೆ"** ಎಂದು ಪ್ರತ್ಯೇಕ ಅಂಕಣದಲ್ಲಿ ಕಾಣಿಸಬೇಕು ಮತ್ತು ಸಮಗ್ರ ವೇತನ ಬಿಲ್ಲಿನಲ್ಲಿ ಕಡಿತಗೊಳಿಸಿದ ಒಟ್ಟು ಮೊತ್ತವನ್ನು ವೇತನ ಬಿಲ್ಲಿನ ಮುಖ ಪುಟದಲ್ಲಿ **"ಮಂಡ್ಯ ಸರ್ಕಾರಿ ನೌಕರರ ಸಮುದಾಯ ಭವನದ ನಿರ್ಮಾಣಕ್ಕಾಗಿ ವಂತಿಕೆ"** ಎಂಬುದಾಗಿ ಸ್ಪಷ್ಟವಾಗಿ ನಮೂದಿಸಬೇಕು. ಜಿಲ್ಲಾ ಖಜಾನೆ ಅಧಿಕಾರಿಗಳು ಒಟ್ಟು ಮೊತ್ತವನ್ನು ಈ ಕೆಳಗೆ ನಮೂದಿಸಿರುವ ಲೆಕ್ಕ ಶೀರ್ಷಿಕೆಗೆ ವರ್ಗಾವಣೆ ಜಮಾ ಮೂಲಕ ಬಿಲ್ಲನ್ನು ಪಾವತಿ ಮಾಡಬೇಕು. ವೇತನ ಬಟವಾಡೆ ಮಾಡಲು ನಿವ್ವಳ ಮೊತ್ತಕ್ಕೆ ಚೆಕ್ಕನ್ನು ಬಟವಾಡೆ ಅಧಿಕಾರಿಗೆ ಅವರು ನೀಡಬೇಕು.

ಈ) ಮಂಡ್ಯ ನಗರದಲ್ಲಿ ಸರ್ಕಾರಿ ನೌಕರರ ಸಮುದಾಯ ಭವನದ ನಿರ್ಮಾಣಕ್ಕಾಗಿ ಮಂಡ್ಯ ಜಿಲ್ಲೆಯ ರಾಜ್ಯ ಸರ್ಕಾರಿ ಅಧಿಕಾರಿ/ನೌಕರರ ಒಂದು ದಿನದ ವೇತನವನ್ನು ಕಟಾಯಿಸಿ ಸದರಿ ಮೊತ್ತವನ್ನು ಲೆಕ್ಕಶೀರ್ಷಿಕೆ **"8449-00-120-9-62-Construction of Community Hall at Mandya"** ಯಡಿ ಜಮಾ ಮಾಡತಕ್ಕದ್ದು. ಹೀಗೆ ಜಮಾ ಮಾಡುವ ಒಟ್ಟು ಮೊತ್ತಕ್ಕೆ ಜಿಲ್ಲಾ ಖಜಾನೆ ಅಧಿಕಾರಿಯು ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ ಇವರಿಗೆ ಕ್ರೋಢೀಕೃತ ಮೊಬಲಗಿಗೆ ಚೆಕ್ಕನ್ನು ನೀಡುವುದು.

ಉ) 2019ರ ನವೆಂಬರ್ ತಿಂಗಳಿನಲ್ಲಿ ಸ್ವೀಕರಿಸಲಾದ ವೇತನ ಬಿಲ್ಲುಗಳ ನಿರ್ವಹಣೆಯನ್ನು 2019ರ ಡಿಸೆಂಬರ್ 31ನೇ ದಿನಾಂಕದೊಳಗೆ ಪೂರೈಸಬೇಕು. ಡಿಸೆಂಬರ್ ತಿಂಗಳು ಅಂತ್ಯಗೊಂಡ ನಂತರ ಪಾವತಿ ಮಾಡಿದ ಬಿಲ್ಲುಗಳ ಪ್ರಕರಣಗಳಲ್ಲಿ ಅವುಗಳನ್ನು ಪಾವತಿ ಮಾಡಿದ ಒಂದು ವಾರದೊಳಗೆ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ ಇವರಿಗೆ ಚೆಕ್ಕನ್ನು ಕಳುಹಿಸಬೇಕು ಹಾಗೂ ಹೀಗೆ ಕೈಗೊಂಡ ಕ್ರಮದ ಬಗ್ಗೆ ಒಂದು ಪ್ರತಿಯನ್ನು ಆರ್ಥಿಕ ಇಲಾಖೆಗೆ ಕಳುಹಿಸಬೇಕು.

ಊ) ಮಹಾಲೇಖಪಾಲರು ನೀಡಿದ ಅಧಿಕಾರ ಪತ್ರದ ಮೇಲೆ ತಮ್ಮ ವೇತನವನ್ನು ಖಜಾನೆಯಿಂದ ಪಡೆಯುವ ಅಧಿಕಾರಿಗಳೂ ಸಹ ಮೇಲೆ ಕಾಣಿಸಿದ ಕ್ರಮವನ್ನು ಪಾಲಿಸುವುದು.

.......

ಐ) **ಜಿಲ್ಲಾಧಿಕಾರಿ, ಮಂಡ್ಯ ಜಿಲ್ಲೆ** ಅವರು ಈ ವಂತಿಕೆ ಹಣವನ್ನು ಉದ್ದೇಶಿತ ಯೋಜನೆಗೆ ಬಳಸಿಕೊಳ್ಳಲು ಅಧಿಕಾರ ಹೊಂದಿರುತ್ತಾರೆ.

ಎ) ಉದ್ದೇಶಿತ ಒಂದು ದಿನದ ವೇತನ ಕಟಾಯಿಸಿ ವಂತಿಗೆ ನೀಡುವ ಕ್ರಮ ಜರುಗಿಸಿದ ನಂತರ, ಉಳಿಕೆ ಮೊತ್ತವನ್ನು Consolidated Fund ಗೆ ವರ್ಗಾಯಿಸುವುದರ ಮುಖಾಂತರ ಸದರಿ ಲೆಕ್ಕ ಶೀರ್ಷಿಕೆಯನ್ನು ಮುಕ್ತಾಯ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ.ಎಸ್.ಜೋಗೋಜಿ)
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-2)

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಗೆ,**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
4. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
5. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳು,
7. ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಕಾರ್ಯಾಲಯ, ಮಂಡ್ಯ.
9. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆ, ಮಂಡ್ಯ.
10. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
11. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನ, ಬೆಂಗಳೂರು.
13. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಜಿಲ್ಲಾ ಶಾಖೆ, ಮಂಡ್ಯ.
14. ವಾರ ಪತ್ರ / ರಕ್ಷಾ ಕಡತ.